ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 555 ಗ್ರಾಪಂಅ 2012

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 20-11-2012

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿಗಳು ವಸೂಲು ಮಾಡಿದ ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ನಿಧಿಗೆ ಜಮಾ ಮಾಡುವ ಬಗ್ಗೆ

ಉಲ್ಲೇಖ: ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಅ.ಸ.ಪತ್ರ ಸಂಖ್ಯೆ: ಸಕಇ 42. SBR 2012 ದಿನಾಂಕ:10-10-2012

ಕರ್ನಾಟಕ ಭಿಕ್ಷಾಟನೆ ನಿಷೇಧ ಕಾಯ್ದೆ 1975 ರ ಸೆಕ್ಷನ್ 31(1) ರಲ್ಲಿ ಸಾರ್ವಜನಿಕರು ಅವರ ಹೊಂದಿರುವ ಭೂಮಿ ಮತ್ತು ಕಟ್ಟಡದ ಮೇಲೆ ವಿಧಿಸುವ ತೆರಿಗೆಗಳಲ್ಲಿ ಶೇ 3% ರಷ್ಟು ಭಿಕ್ಷುಕರ ಕರವನ್ನು ಗ್ರಾಮ ಪಂಚಾಯತಿಗಳು ವಸೂಲಿ ಮಾಡಿ ಅದನ್ನು ಕೇಂದ್ರ ಪರಿಹಾರ ಸಮಿತಿಗೆ ಪಾವತಿಸಬೇಕಾಗಿದೆ. ಆದರೆ ಹಲವಾರು ಗ್ರಾಮ ಪಂಚಾಯತಿಗಳು ಸಂಗ್ರಹಿಸಿದ ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ಸಮಿತಿಗೆ ಪೂರ್ಣವಾಗಿ ಜಮಾ ಮಾಡುತ್ತಿಲ್ಲವೆಂದು ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ ಹಾಗೂ ಬಾಕಿ ಇರುವ ಕರದ ಮೊತ್ತ ಪಾವತಿಸುವ ಬಗ್ಗೆ ಮತ್ತು ಪ್ರತಿ ಆರ್ಥಿಕ ಸಾಲಿನಲ್ಲಿ ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ಸಮಿತಿಗೆ ಪ್ರತಿ ತ್ರೈಮಾಸಿಕದ ಅಂತ್ಯಕ್ಕೆ ಅನ್ವಯವಾಗುವಂತೆ ತಪ್ಪದೇ ಜಮಾ ಮಾಡುವಂತೆಯೂ ಹಾಗೂ ಪ್ರತಿ ತ್ರೈಮಾಸಿಕ ಅಂತ್ಯಕ್ಕೆ ತಮ್ಮ ಅಧೀನದಲ್ಲಿ ಜಿಲ್ಲಾ ಮಟ್ಟದ ಪ್ರಾಧಿಕಾರದಿಂದ ಅಥವಾ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳ ಪ್ರಾಧಿಕಾರಗಳಿಂದ ಭಿಕ್ಷುಕ ಕರದ ಅಂಕಿ ಅಂಶಗಳು, ಪಾವತಿ ಮತ್ತು ಬಾಕಿ (**DCB- Demand, Collection, Balance**) ಮಾಹಿತಿಯನ್ನು, ಕಾರ್ಯದರ್ಶಿಗಳು, ಕೇಂದ್ರ ಪರಿಹಾರ ಸಮಿತಿ, ಬೆಂಗಳೂರು ಇವರ ಇಮೇಲ್ ವಿಳಾಸ crcbng@yahoo.co.in ಮುಖೇನ ಮಾಹಿತಿ ಒದಗಿಸಲು ಅನುವಾಗುವಂತೆ ಸೂಕ್ತ ಕ್ರಮವಹಿಸಲು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯತಿಗಳು ವಸೂಲು ಮಾಡಿದ ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ಸಮಿತಿಗೆ ಪಾವತಿಸಿ ಮೇಲಿನಂತೆ ಮಾಹಿತಿ ಒದಗಿಸಲು ಕ್ರಮ ವಹಿಸುವಂತೆ ತಿಳಿಸಿದೆ.

ಎಂ. ಎಲ್. ನರೋನ್ಹ 20/11/12
(ಮಾರ್ಗರೇಟ್ ಲೀನಾ ನರೋನ್ಹ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯ ಮುಖಾಂತರ)
4) ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1) ಸರ್ಕಾರದ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ – ಮಾಹಿತಿಗಾಗಿ.